# 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಚನ್ನರಾಯಪಟ್ಟಣ

## CC 879/2020

| | | | |
|---|---|---|---|
| ಸಾಕ್ಷಿದಾರರ ಹೆಸರು | ಃ | ಮಂಜುನಾಥ | **C.W – 4** |
| ತಂದೆಯ ಹೆಸರು | ಃ | ಲಿಂಗೇಗೌಡ | **P.W – 4** |
| ವಯಸ್ಸು | ಃ | 61 ವರ್ಷ | |
| ಉದ್ಯೋಗ | ಃ | - | **ಪ್ರಮಾಣ ವಚನ ಬೋಧಿಸಲಾಯಿತು.** |
| ವಾಸ | ಃ | ಮಸನಹಳ್ಳಿ, ಚನ್ನರಾಯಪಟ್ಟಣ | ದಿನಾಂಕಃ **04.07.2026** |

**ಮುಖ್ಯವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಸಾಕ್ಷಿಗೆ ಕೃತ್ಯ ಸ್ಥಳ ಮಹಜರನ್ನು ತೋರಿಸಲಾಗಿ ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ ಪಿ 2 ಎಂದು ಗುರುತಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿ ಪಿ 2(ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಪೋಲೀಸ್ ಠಾಣೆಯಲ್ಲಿ ಸುಮಾರು ವರ್ಷಗಳ ಹಿಂದೆ ಹಾಕಿರುತ್ತೇನೆ. ಸದರಿ ಸಹಿಯನ್ನು ಯಾವ ವಿಚಾರಕ್ಕೆ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿ ಪಿ 2 ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ. ನಿಪಿ–2 ಕ್ಕೆ ನನ್ನ ಜೊತೆ ಯಾರು ಸಹಿ ಹಾಕಿರುತ್ತಾರೆ ಮತ್ತು ಎಷ್ಟು ಗಂಟೆ ಸಮಯದಲ್ಲಿ ಸಹಿ ಹಾಕಿರುತ್ತೇವೆ ಎಂದು ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ಮಹಜರ್ ಕ್ರಮ ಜರುಗಿಸಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸರ್ಕಾರಿ ಅಭಿಯೋಜಕರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)***

**ಪಾಟೀ ಸವಾಲುಃ** ಮಾನ್ಯ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ *26.08.2020* ರಂದು ಬೆಳಿಗ್ಗೆ *10.00* ರಿಂದ *11.00* ಗಂಟೆ ಸಮಯದಲ್ಲಿ ಪೋಲೀಸರು ಕೃತ್ಯ ನಡೆದ ಸ್ಥಳಕ್ಕೆ ಬಂದು ನನ್ನನ್ನು ಪಂಚರಾಗಿ ಹಾಜರಾಗುವಂತೆ ಕೇಳಿದ ಮೇರೆಗೆ ನಾನು ಒಪ್ಪಿರುತ್ತೇನೆ ಎಂದರೆ ಸರಿಯಲ್ಲ.

ಚಾಸಾ–*2*ರವರು ಕೃತ್ಯ ನಡೆದ ಸ್ಥಳವನ್ನು ತೋರಿಸಿ ಮುಮಾ.*1* ಮತ್ತು *2* ಅನ್ನು

ಹಾಜರುಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಪೋಲೀಸರು ನನ್ನ ಸಮಕ್ಷಮ ನಿಪಿ–*2* ರಂತೆ ಮಹಜರು ಮಾಡಿ ಮು.ಮಾ. *1* ಮತ್ತು *2* ಅನ್ನು ನನ್ನ ಸಮಕ್ಷಮ ಅಮಾನತುಪಡಿಸಿಕೊಂಡು ನನ್ನ ಸಹಿಯನ್ನು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

**ಪಾಟೀ ಸವಾಲು** – ಸಾಕ್ಷಿಯು ಸಂಪೂರ್ಣ ಪ್ರತಿಕೂಲ ಸಾಕ್ಷಿಯಾದ್ದರಿಂದ ಪಾಟಿ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆ ಇಲ್ಲ .**

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

2ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ.ಚನ್ನರಾಯಪಟ್ಟಣ